ಶ್ರೀ ತನ್ವೀರ್ ಸೇಠ್: ಮಾನ್ಯ ಅಧ್ಯಕ್ಷರೆ, ಮಾನ್ಯ ಕಾರ್ಮಿಕ ಸಚಿವರು ಉತ್ತರವನ್ನು ನೀಡಿದ್ದಾರೆ. ಸಾಮಾಜಿಕ ನ್ಯಾಯ ದೊರಕಿಸಿ ಕೊಡುವ ಹಿನ್ನೆಲೆಯಲ್ಲಿ ನೇಮಕಾತಿಯನ್ನು ಮಾಡಬೇಕಾದರೆ ಆಗುವಂಥ ತಾರತಮ್ಯಗಳು ತಡೆಯಬೇಕು. ಮಾನ್ಯ ಸಚಿವರು ಈ ಪ್ರಕರಣದಲ್ಲಿ ಈಗಾಗಲೇ ಕ್ರಮ ಜರುಗಿಸಿದ್ದಾರೆ. ಇನ್ನು ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳಬೇಕಾಗಿ ಮಾನ್ಯ ಸಚಿವರಲ್ಲಿ ಕೇಳಿಕೊಳ್ಳುತ್ತೇನೆ.

ಶ್ರೀ ಬಿ.ಎನ್. ಬಚ್ಚೇಗೌಡ: ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಹೇಳಿದಂತೆ ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳುತ್ತೇನೆ.

ಅಧ್ಯಕ್ಷರು: ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಅ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು: ಒಂಭತ್ತನೆ ಪಟ್ಟಿ

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಸನ್ಮಾನ್ಯ ಅಧ್ಯಕ್ಷರೆ, ದಿನಾಂಕ: 08–07–2010 ರ 9ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 102 ಪ್ರಶ್ನೆಗಳ ಪೈಕಿ 90 ಪ್ರಶ್ನೆಗಳ ಉತ್ತರಗಳನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು (ಅನುಬಂಧ – 1)

ಈಗ ಶ್ರೀ ಅಪ್ಪಚ್ಚು ರಂಜನ್‌ರವರು 2009–10ನೇ ಸಾಲಿನ ಅರ್ಜಿಗಳ ಸಮಿತಿಯ ಮೊದಲನೇ ವರದಿಯನ್ನೊಪ್ಪಿಸುವುದು.

2. ವರದಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು ರಂಜನ್: ಮಾನ್ಯ ಅಧ್ಯಕ್ಷರೆ, 13ನೇ ವಿಧಾನಸಭೆಯ 2009–10ನೇ ಸಾಲಿನ ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ ಅಧ್ಯಕ್ಷನಾದ ನಾನು ಅರ್ಜಿ ಸಂಖ್ಯೆ: 71/2010, ಕೋರಮಂಗಲ, ವೆಂಕಟಾಪುರ ಬಡಾವಣೆಯ ಸರ್ಜಾಪುರ ರಸ್ತೆ,